# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸ್ವಾಲಂಬನ್ ಮಾರ್ಜಿನ್ ಹಣ ಸಾಲ ಯೋಜನೆಯಡಿ ಬಿಡುಗಡೆ ಮಾಡುತ್ತಿರುವ ಸಾಲದ ಮಿತಿಯನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರಿ ಆದೇಶ ಸಂಖ್ಯೆ: ಸಕಇ 82 ಬಿಸಿಎ 96, ದಿನಾಂಕ: 29.12.1998
2) ತಿದ್ದುಪಡಿ ಆದೇಶ ಸಂಖ್ಯೆ: ಸಕಇ 165 ಬಿಎಂಎಸ್ 2011,ದಿ: 28.07.2010
3) ಕೆಎಂಡಿಸಿ ಇವರ ಪತ್ರ ಸಂಖ್ಯೆ:ಕಅಅನಿ/ ^ಸ್ವಾ^ ಮಾಹಸಾಯೋ/2011-12/2416, ದಿನಾಂಕ: 23.11.2011

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2) ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳು ಅನುಷ್ಠಾನಗೊಳಸುತ್ತಿರುವ ^ಚೈತನ್ಯ^ ಹಾಗೂ ^ಸ್ವಾಲಂಬನಾ ^ ಮಾರ್ಜಿನ್ ಹಣ ಸಾಲ ಯೋಜನೆಯಡಿಯಲ್ಲಿ ಸಾಲದ ಮೊತ್ತ ರೂ. 1.00 ಲಕ್ಷದಿಂದ ರೂ. 05.00 ಲಕ್ಷಗಳವರೆಗೆ ಇರುವ ಘಟಕೆಗಳಿಗೆ ಮಾರ್ಜಿನ್ ಹಣ ಸಾಲವನ್ನು ಶೇ:20ರ ದರದಲ್ಲಿ ಗರಿಷ್ಠ ರೂ. 01.00 ಲಕ್ಷಗಳವರೆಗೆ ಹೆಚ್ಚಿಸಿ ಆದೇಶಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಇವರು ಮನವಿ ಸಲ್ಲಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ (1)ಮತ್ತು (2)ರ ಪ್ರಕಾರ ಸ್ವಾಲಂಬನ್ ಮಾರ್ಜಿನ್ ಹಣ ಸಾಲ ಯೋಜನೆಯಡಿ ಬಿಡುಗಡೆ ಮಾಡುತ್ತಿರುವ ಸಾಲದ ಮಿತಿಯನ್ನು ಹೆಚ್ಚಿಸುವ ಬಗ್ಗೆ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ. ಈ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ.

## ಸರ್ಕಾರಿ ಆದೇಶ ಸಂಖ್ಯೆ: MWD 05 MDC 2012, ಬೆಂಗಳೂರು ದಿನಾಂಕ:127.08.2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರಿ ಆದೇಶ ಸಂಖ್ಯೆ: ಸಕಇ 82 ಬಿಸಿಎ 96, ದಿನಾಂಕ: 29.12.1998ರ ಆದೇಶವನ್ನು ಭಾಗಶ: ಮಾರ್ಪಡಿಸಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಅನುಷ್ಠಾನಗೊಳಸುತ್ತಿರುವ ಸ್ವಾಲಂಬನ ಮಾರ್ಜಿನ್ ಹಣ ಸಾಲ ಯೋಜನೆಯ ಸಾಲದ ಮಿತಿಯನ್ನು ರೂ 1.00 (ಒಂದು ಲಕ್ಷ) ಲಕ್ಷದಿಂದ ರೂ. ಐದು ಲಕ್ಷದವರೆಗೆ (ರೂ.ಐದು ಲಕ್ಷ) ಇರುವ ಘಟಕಗಳಿಗೆ ಮಾರ್ಜಿನ ಹಣ ಶೇ: 20 ರಷ್ಟು ದರದಲ್ಲಿ ಗರಿಷ್ಠ ರೂ. 1.00 ಲಕ್ಷಗಳವರೆಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಉಳಿಕೆ ಮೊತ್ತವನ್ನು ಬ್ಯಾಂಕ್‌ಗಳಿಂದ ಸಾಲವನ್ನು ಪಡೆಯವಂತೆ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎಂ. ನಾಗರತ್ನ
(ಎಂ. ನಾಗರತ್ನ)
ಸರ್ಕಾರದ ಉಪ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ.

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು